**ಅ.ದಾ. ಸಂಖ್ಯೆ : 228/2024**
**ಪಿ..ಡಬ್ಲ್ಯೂ -01**

**ದಿನಾಂಕಃ 03.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ :- ವಾದಿಯ ಪರ ಶ್ರೀ. ಸಿ ಎಂ ವಕೀಲರಿಂದ :-**

ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತದೆ ಮತ್ತು ಪ್ರಮಾಣಪತ್ರದಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣಪತ್ರವನ್ನು ವಕೀಲರಿಗೆ ನಾನು ಹೇಳಿ ಬರೆಯಿಸಿರುತ್ತೇನೆ. ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ಗುರುತಿಸಲು ಕೇಳಿಕೊಳ್ಳುತ್ತೇನೆ.

ದಿನಾಂಕ 02.04.2024 ರಂದು ಪ್ರತಿವಾದಿಗಳಿಗೆ ನೀಡಿದ ಕಾನೂನು ತಿಳುವಳಿಕೆಯನ್ನು ಹಾಜರು ಪಡಿಸಿದ್ದು ನಿಪಿ-01 ಎಂದು ಗುರುತಿಸಲಾಯಿತು. ಅಂಚೆ ರಸೀದಿಗಳನ್ನು ಹಾಜರು ಪಡಿಸಿದ್ದು ನಿಪಿ-02, ನಿಪಿ-03 ಮತ್ತು ನಿಪಿ-04 ಎಂದು ಗುರುತಿಸಲಾಯಿತು. ವಾಪಸ್ ಆದ ಆರ್ ಪಿ ಎ ಡಿ ಹಾಜರು ಪಡಿಸಿದ್ದು ನಿಪಿ-05 ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತಿಗಳನ್ನು ಹಾಜರು ಪಡಿಸಿದ್ದು ನಿಪಿ-06, ನಿಪಿ-07 ಮತ್ತು ನಿಪಿ-08 ಎಂದು ಗುರುತಿಸಲಾಯಿತು. ಸರ್ವೆ ನಂ.71ರ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ನಿಪಿ-09 ಮತ್ತು ನಿಪಿ-10 ಎಂದು ಗುರುತಿಸಲಾಯಿತು. ಧೃಡೀಕೃತ ನಕಲಿನ ಇ-ಖಾತಾ ಹಾಜರು ಪಡಿಸಿದ್ದು ನಿಪಿ-11 ಎಂದು ಗುರುತಿಸಲಾಯಿತು. ಧೃಡೀಕೃತ ನಕಲಿನ ಮ್ಯುಟೇಷನ್ ನಂ.13/2006-07 ಅನ್ನು ಹಾಜರು ಪಡಿಸಿದ್ದು ನಿಪಿ-12 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ **ವಾದಿಯ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ, ಸಮಯ ನೀಡಿ ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.**

ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,

ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ.
ಮಾಗಡಿ.